RNU AIR DHARWAD

# OCTOBER 08 2023
# ALL INDIA RADIO- DHARWAD
# PRADESH SAMACHARA (KANNADA) 7:05 AM

**ಮುಖ್ಯಾಂಶಗಳು**

- **ಬಡತನ ನಿವಾರಣೆಗೆ ಸಮ ಸಮಾಜ ನಿರ್ಮಾಣ ಅಗತ್ಯ – ಮುಖ್ಯಮಂತ್ರಿ ಸಿದ್ದರಾಮಯ್ಯ.**
- **ಮೇಕೆದಾಟು ಅಣೆಕಟ್ಟು ಅಗತ್ಯತೆ ಕುರಿತು ಅರ್ಜಿ; ಅನುಮತಿ ನೀಡುವಂತೆ ಸಚಿವ ಚಲುವರಾಯಸ್ವಾಮಿ ಮನವಿ.**
- **ಬಾಲಕಾರ್ಮಿಕರ ರಕ್ಷಣೆಗೆ ಕಾರ್ಯಪಡೆ ರಚಿಸಲು ಚಿಂತನೆ – ಸಚಿವ ಸಂತೋಷ್ ಲಾಡ್.**
- **ಕೇಂದ್ರ ಬರ ಅಧ್ಯಯನ ತಂಡಗಳಿಂದ ಮುಂದುವರೆದ ವಿವಿಧ ಜಿಲ್ಲೆಗಳ ಭೇಟಿ; ಅಧಿಕಾರಿಗಳಿಂದ ಮಾಹಿತಿ ಸಂಗ್ರಹಣೆ.**

**ಈಗ ವಾರ್ತೆಗಳ ವಿವರ**

**ಬಡತನ ನಿವಾರಣೆ ಕಾರ್ಯಕ್ರಮ ರೂ**ಪಿಸುವಾಗ ಸಮ ಸಮಾಜ ನಿರ್ಮಿಸಬೇಕು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಿಪ್ರಾಯ ಪಟ್ಟಿದ್ದಾರೆ. ಮೈಸೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಾಮಾಜಿಕ, ಆರ್ಥಿಕ ಹಾಗೂ ರಾಜಕೀಯ ಅಸಮಾನತೆ ಇರುವ ಜಾತಿಗಳನ್ನು ಮುಖ್ಯವಾಹಿನಿಗೆ ತರಲು ಅಂಕಿ ಅಂಶಗಳು ಅಗತ್ಯ. ಅದಕ್ಕಾಗಿ ಜಾತಿಗಣತಿ ಮಾಡಬೇಕು ಎಂದರು. ಗ್ಯಾರಂಟಿ ಯೋಜನೆಗಳಿಗೆ ತೊಂದರೆ ಇಲ್ಲ. ಬರ ಪರಿಹಾರಕ್ಕೂ ಕೇಂದ್ರ ಸರ್ಕಾರಕ್ಕೆ 4 ಸಾವಿರದ 860 ಕೋಟಿ ರೂಪಾಯಿ ನೆರವು ಕೋರಲಾಗಿದೆ. ಕೇಂದ್ರ ಬರ ಅಧ್ಯಯನ ತಂಡಗಳು 11 ಜಿಲ್ಲೆಗಳಿಗೆ ಭೇಟಿ ನೀಡಿ ಪರಿಸ್ಥಿತಿಯನ್ನು ಅವಲೋಕಿಸಿ, ವರದಿ ನೀಡಿದ ಆಧಾರದ ಮೇಲೆ ಕೇಂದ್ರ ಸರ್ಕಾರ ಪರಿಹಾರ ನಿಗದಿಪಡಿಸಲಿದೆ ಎಂದರು.

*******

**ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ ನೌಕರರ** ವೈಯಕ್ತಿಕ ಅಪಘಾತ ವಿಮಾ ಯೋಜನೆಯಲ್ಲಿ ಖಾಸಗಿ ಅಥವಾ ಕರ್ತವ್ಯ ನಿರತ ಅಪಘಾತದಲ್ಲಿ ಮೃತಪಟ್ಟ ನೌಕರರ ನಾಮ ನಿರ್ದೇಶಿತರಿಗೆ ಒಟ್ಟು ಒಂದು ಕೋಟಿ ಅಪಘಾತ ಪರಿಹಾರ ವಿಮಾ ಮೊತ್ತವನ್ನು ನೀಡಲಾಗುತ್ತದೆ. ಸಾರಿಗೆ ನಿಗಮಗಳಲ್ಲಿ, ದೇಶದಲ್ಲಿಯೇ ಪ್ರಥಮ ಬಾರಿಗೆ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದಲ್ಲಿ ಜಾರಿಗೊಳಿಸಲಾಗಿದೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ನಿನ್ನೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಹಿಳೆಯರಿಗೆ ಆರ್ಥಿಕವಾಗಿ ಶಕ್ತಿ ತುಂಬುವ ಕೆಲಸವನ್ನು ತಮ್ಮ ಸರ್ಕಾರ ಮಾಡುತ್ತಿದೆ. ಶಕ್ತಿ ಯೋಜನೆಯಡಿ ಈವರೆಗೂ ಸುಮಾರು 70.73 ಕೋಟಿ ಮಹಿಳೆಯರು ಉಚಿತವಾಗಿ ಬಸ್ ಪ್ರಯಾಣ ಮಾಡಿದ್ದಾರೆ ಎಂದರು. ಸಾರಿಗೆ ಖಾತೆ ಸಚಿವ ರಾಮಲಿಂಗಾರೆಡ್ಡಿ ಮಾತನಾಡಿ, ಪ್ರತಿ ವರ್ಷ ಶೇಕಡ 10 ರಷ್ಟು ಬಸ್‌ಗಳನ್ನು ಸ್ಥಗಿತಗೊಳಿಸಿ ಹೊಸ ಬಸ್‌ಗಳನ್ನು ಖರೀದಿಸಬೇಕಾಗುತ್ತದೆ. ಜನಸಂಖ್ಯೆಗೆ ಅನುಗುಣವಾಗಿ ಸುಮಾರು 12 ಸಾವಿರ ಬಸ್‌ಗಳು ಸೇರ್ಪಡೆಯಾಗಬೇಕು ಎಂದರು.

*******

**ಮೇಕೆದಾಟು ಸಮತೋಲಿತ ಅಣೆಕಟ್ಟು ನಿರ್ಮಾಣದ ಅಗತ್ಯತೆ ಕುರಿತು** ರಾಜ್ಯ ಸರ್ಕಾರ ಸುಪ್ರೀಂಕೋರ್ಟ್ ಮತ್ತು ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ ಮುಂದೆ ಅರ್ಜಿ ಸಲ್ಲಿಸಲಿದ್ದು, ಅಗತ್ಯ ಅನುಮತಿಗಳನ್ನು ಕೊಡಿಸುವಂತೆ ಮನವಿ ಸಲ್ಲಿಸಲಾಗಿದೆ ಎಂದು ಕೃಷಿ ಖಾತೆ ಸಚಿವ ಚಲುವರಾಯ ಸ್ವಾಮಿ ತಿಳಿಸಿದ್ದಾರೆ. ಮಂಡ್ಯದಲ್ಲಿ ನಿನ್ನೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾವೇರಿ ನದಿ ನೀರಿನ ಹಂಚಿಕೆ ವಿಷಯವಾಗಿ ಸುಪ್ರೀಂಕೋರ್ಟ್ ವಿಚಾರಣೆಯ ವೇಳೆ ಮೇಕೆದಾಟು ಯೋಜನೆಯಿಂದ ಎರಡೂ ರಾಜ್ಯಗಳಿಗೆ ಅನುಕೂಲವಾಗಲಿದೆ ಎಂದು ಅಭಿಪ್ರಾಯ ವ್ಯಕ್ತಪಡಿಸಿತ್ತು. ಆದರೂ ತಮಿಳುನಾಡು ಆಕ್ಷೇಪಣೆ ವ್ಯಕ್ತಪಡಿಸಿದ್ದು, ಈ ಕುರಿತು ವಿಚಾರಣೆ ನಡೆಸುವುದಾಗಿ ನ್ಯಾಯಾಲಯ ಭರವಸೆ ನೀಡಿದೆ. ಕರ್ನಾಟಕ ಸರ್ಕಾರದ ಪರವಾಗಿ ಮೇಕೆದಾಟು ತಕರಾರು ಅರ್ಜಿಯನ್ನು ಇತ್ಯರ್ಥಪಡಿಸುವಂತೆ ಕೋರಲಾಗಿದೆ ಎಂದರು. ಕುಡಿಯುವ ನೀರು ಹಾಗೂ ಸಂಕಷ್ಟ ಸಂದರ್ಭದಲ್ಲಿ ತಮಿಳುನಾಡಿಗೆ ನೀರು ಬಿಡಲು ಅಣೆಕಟ್ಟು ನಿರ್ಮಿಸಲಾಗುತ್ತಿದೆ. ಇದಕ್ಕೂ ಹಣಕಾಸಿನ ಕೊರತೆ ಇಲ್ಲ ಎಂದು ಹೇಳಿದರು.

*******

**ಬಾಲಕಾರ್ಮಿಕರ ರಕ್ಷಣೆಗೆ ಕಾರ್ಯಪಡೆ ರಚಿಸುವ ಬಗ್ಗೆ** ಚಿಂತನೆ ನಡೆಸಲಾಗಿದ್ದು, ಸಧ್ಯದಲ್ಲೇ ತೀರ್ಮಾನ ತೆಗೆದುಕೊಳ್ಳಲಾಗುವುದು ಎಂದು ಕಾರ್ಮಿಕ ಖಾತೆ ಸಚಿವ ಸಂತೋಷ್ ಎಸ್.ಲಾಡ್ ಹೇಳಿದ್ದಾರೆ. ಬಳ್ಳಾರಿ ಹಾಗೂ ವಿಜಯನಗರ ಜಿಲ್ಲೆಗಳ ಕಾರ್ಮಿಕರ ಇಲಾಖೆಯ ಪ್ರಗತಿ ಪರಿಶೀಲನೆ ನಡೆಸಿ ನಂತರ ಮಾತನಾಡಿದ ಅವರು, ಅಂಗಡಿ, ಹೋಟೆಲ್ ಮತ್ತು ವಾಣಿಜ್ಯ ಮಳಿಗೆಗಳು ವ್ಯಾಪಾರ ಪರವಾನಗಿ ಪಡೆಯದೆ, ನೋಂದಣಿಯಾಗದೆ ಇದ್ದಲ್ಲಿ ಅಂತಹ ಕಡೆಗೆ ಭೇಟಿ ನೀಡಿ, ಪರಿಶೀಲಿಸಿ, ನೋಂದಣಿ ಕಾರ್ಯ ಕೈಗೊಳ್ಳಬೇಕು ಎಂದರು.

ಕಾರ್ಮಿಕರ ಕಲ್ಯಾಣಕ್ಕಾಗಿ ಇಲಾಖೆಯ ಕೋರ್ಟ್ ಪ್ರಕರಣಗಳ ಇತ್ಯರ್ಥ ಹಾಗೂ ಕರ ಸಂಗ್ರಹದ ಬಗ್ಗೆ ಕಟ್ಟುನಿಟ್ಟಿನ ಕ್ರಮ ವಹಿಸಬೇಕು. ನಕಲಿ ದಾಖಲಾತಿ ಸೃಷ್ಟಿಸಿ ಕಾರ್ಮಿಕ ಕಾರ್ಡ್‌ಗಳನ್ನು ಪಡೆದಿರುವುದನ್ನು ಪರಿಶೀಲಿಸಿ ರದ್ದುಗೊಳಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

*******

**ರಾಯಚೂರು ನಗರದ ಐತಿಹಾಸಿಕ ಮಾವಿನಕೆರೆಯ 7 ಎಕರೆ** 37 ಗುಂಟೆ ಪ್ರದೇಶ ಒತ್ತುವರಿಯಾಗಿದ್ದು, ಈಗಾಗಲೇ ಒತ್ತುವರಿಯಾಗಿರುವ ಪ್ರದೇಶಗಳನ್ನು ಗುರುತಿಸಿ ಕೆರೆಯ ಅಭಿವೃದ್ಧಿಗಾಗಿ ಕಾನೂನಾತ್ಮಕ ಸಮಸ್ಯೆಗಳನ್ನು ನಿವಾರಿಸುವ ಮೂಲಕ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಖಾತೆ ಸಚಿವ ಎನ್.ಎಸ್ ಬೋಸರಾಜು ಹೇಳಿದ್ದಾರೆ. ರಾಯಚೂರಿನ ಜಿಲ್ಲಾ ಪಂಚಾಯತ್ ಕಚೇರಿ ಸಭಾಂಗಣದಲ್ಲಿ ಮಾವಿನಕೆರೆ ಸ್ವಚ್ಛತೆ ಹಾಗೂ ನಗರದ ವಿವಿಧ ಅಭಿವೃದ್ಧಿ ಕಾಮಗಾರಿಗಳ ಕುರಿತು ಹಮ್ಮಿಕೊಂಡಿದ್ದ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಐತಿಹಾಸಿಕ ಮಾವಿನಕೆರೆ ಸೇರಿದಂತೆ ಜಿಲ್ಲೆಯ ಇನ್ನಿತರ ಕೆರೆಗಳಿಗೆ ಹಾಗೂ ಕುಡಿಯುವ ನೀರಿನ ಮೂಲಗಳಿಗೆ ಕಲುಷಿತ ನೀರು ಸೇರದಂತೆ ಅಧಿಕಾರಿಗಳು ಗಮನಹರಿಸಬೇಕು ಎಂದರು. ಸಾರ್ವಜನಿಕರ ಸುರಕ್ಷತೆಯ ಹಿತದೃಷ್ಟಿಯಿಂದ ಸೂಕ್ಷ್ಮ ಮತ್ತು ಅತಿ ಸೂಕ್ಷ್ಮ ಪ್ರದೇಶಗಳಲ್ಲಿ ಸಿಸಿ ಕ್ಯಾಮರಾಗಳನ್ನು ಅಳವಡಿಸಲು ಯೋಜನೆಯನ್ನು ರೂಪಿಸಬೇಕು ಮತ್ತು ಅನುದಾನ ಲಭ್ಯತೆಯಾನುಸಾರ ಕ್ರಮ ಕೈಗೊಳ್ಳುವಂತೆ ತಿಳಿಸಿದರು. ಗ್ರಾಮೀಣ ಭಾಗದ ಸಮಸ್ಯೆಗಳಾದ ಕುಡಿಯುವ ನೀರು, ರಸ್ತೆ, ವೈಯಕ್ತಿಕ ಶೌಚಾಲಯ, ವಿದ್ಯುತ್, ಮಹಾತ್ಮಗಾಂಧಿ ಉದ್ಯೋಗ ಖಾತ್ರಿ ಯೋಜನೆಯಡಿ ಜನರಿಗೆ ಉದ್ಯೋಗ ಸೇರಿದಂತೆ ಗ್ರಾಮೀಣ ಭಾಗದ ವಿವಿಧ ಸಮಸ್ಯೆಗಳ ಶಾಶ್ವತ ಪರಿಹಾರಕ್ಕಾಗಿ ಜವಾಬ್ದಾರಿಯಿಂದ ಕಾರ್ಯ ನಿರ್ವಹಿಸಬೇಕು ಎಂದರು.

*******

## ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ.

*******

**ಕೇಂದ್ರ ಸರ್ಕಾರವು ಧಾರವಾಡ ಜಿಲ್ಲೆಯ ಬರ** ಅಧ್ಯಯನಕ್ಕಾಗಿ ನೇಮಿಸಿರುವ ಅಧಿಕಾರಿಗಳ ತಂಡ ನಿನ್ನೆ ಸಂಜೆ ಜಿಲ್ಲೆಯ ವಿವಿಧ ರೈತರ ಜಮೀನುಗಳಿಗೆ ಭೇಟಿ ನೀಡಿ, ಪರಿಶೀಲಿಸಿ ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡಿತು. ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ನೇತೃತ್ವದ ಅಧಿಕಾರಿಗಳ ತಂಡ ಜಿಲ್ಲೆಯ ಮಳೆ ಕೊರತೆ, ಬಿತ್ತನೆಯಾಗದ ಪ್ರದೇಶ, ಬೆಳೆನಾಶದ ಕುರಿತು ಕೇಂದ್ರ ತಂಡದ ಅಧಿಕಾರಿಗಳಿಗೆ ಮನವರಿಕೆ ಮಾಡಿತು. **ಕೇಂದ್ರ ಜಲ ಆಯೋಗದ** ನಿರ್ದೇಶಕ ವಿ.ಅಶೋಕ್ ಕುಮಾರ್ ನೇತೃತ್ವದ ಮೂರನೇ ತಂಡ ದಾವಣಗೆರೆ ಜಿಲ್ಲೆಯ ಜಗಳೂರು ತಾಲ್ಲೂಕಿನ ದೊಣೆಹಳ್ಳಿ, ಭರಮಸಮುದ್ರ, ತಾಯಿಟೋಣಿ, ಹಿರೇಮಲ್ಲನಹೊಳೆ, ಸಿದ್ದಿಹಳ್ಳಿಗಳ ಜಮೀನುಗಳಿಗೆ ಭೇಟಿ ನೀಡಿ ರೈತರ ಅಹವಾಲು ಆಲಿಸಿತು. ಜಿಲ್ಲೆಯಲ್ಲಿ ಆಗಿರುವ ಬೆಳೆ ನ ್ಟದ ವಿವರವನ್ನು ಜಿಲ್ಲಾಧಿಕಾರಿ ಡಾಕ್ಟರ್ ಎಂ.ವಿ.ವೆಂಕಟೇಶ್ ತಂಡಕ್ಕೆ ಮನವರಿಕೆ ಮಾಡಿಕೊಟ್ಟರು. ಜಗಳೂರು ಶಾಸಕ ಬಿ.ದೇವೇಂದ್ರಪ್ಪ ಕ್ಷೇತ್ರದ ಸಮಸ್ಯೆಗಳನ್ನು ತಂಡದ ಗಮನಕ್ಕೆ ತಂದರು. **ಬರ ಪರಿಸ್ಥಿತಿ ಅಧ್ಯಯನ ಕೈಗೊಳ್ಳಲು ಕೇಂದ್ರದಿಂದ ಆಗಮಿಸಿದ** ಎರಡನೇ ತಂಡ ವಿಜಯನಗರ ಜಿಲ್ಲೆಗೆ ಭೇಟಿ ನೀಡಿತು. ನಂದಿಬಂಡಿ, ಹಂಪಸಾಗರ ಸೇರಿದಂತೆ ಜಿಲ್ಲೆಯ ವಿವಿಧ ತಾಲೂಕುಗಳ ಗ್ರಾಮ ಮತ್ತು ಹೋಬಳಿ ಪ್ರದೇಶಗಳಿಗೆ ಬರ ಅಧ್ಯಯನ ತಂಡ ಭೇಟಿ ನೀಡಿ, ಪರಿಶೀಲನೆ ನಡೆಸಿತು. ಮಳೆಯಾಶ್ರಿತ ಪ್ರದೇಶದಲ್ಲಿ ಬಿತ್ತನೆ ಮಾಡಿದ ಬೆಳೆಯು ಮಳೆಯಾಗದೇ ನ ್ಟ ಹೊಂದಿದ್ದು, ಅದರ ವೀಕ್ಷಣೆ ನಡೆಸಿದರು. ಜಿಲ್ಲಾಧಿಕಾರಿ ದಿವಾಕರ ಎಂ.ಎಸ್. ಅಧಿಕಾರಿಗಳಿಗೆ ಮಾಹಿತಿ ಒದಗಿಸಿದರು. ತಂಡದ ಅಧಿಕಾರಿಗಳು ರೈತರ ಜೊತೆ ಮಾತುಕತೆ ನಡೆಸಿದರು.

**ಮಳೆಯ ಕೊರತೆಯಿಂದಾಗಿ** ಬಾಗಲಕೋಟೆ ಜಿಲ್ಲೆಯಲ್ಲಿ ಬರದ ಛಾಯೆ ತಲೆದೋರಿದ್ದು, ಕೃಷಿ ಮತ್ತು ರೈತ ಕಲ್ಯಾಣ ಸಚಿವಾಲಯದ ಜಂಟಿ ಕಾರ್ಯದರ್ಶಿ ಅಜೀತ್ ಕುಮಾರ ಸಾಹು ಅವರ ನೇತೃತ್ವದ ಕೇಂದ್ರ ಅಧ್ಯಯನ ತಂಡ ಬರ ಪರಿಸ್ಥಿತಿ ಪರಿಶೀಲಿಸಿತು. ಬಾಗಲಕೋಟೆ ತಾಲೂಕಿನ ಹೊಸೂರು ಗ್ರಾಮದ ದಾವಲಸಾಬ ಕಾಸಿನಕುಂಟೆ ಅವರ ಜಮೀನಿನಲ್ಲಿ ಕಬ್ಬು ಬೆಳೆ ಹಾನಿಯನ್ನು ವೀಕ್ಷಿಸಿ ರೈತರಿಂದ ಹಾನಿಯ ವಿವರ ಪಡೆದುಕೊಂಡರು. ಚಿಟಕಿನಕೊಪ್ಪ ಗ್ರಾಮದ ಎರಡು ಎಕರೆ ಜಮೀನಲ್ಲಿ ಬೆಳೆದ ತೊಗರಿ ಬೆಳೆ ಹಾನಿಯನ್ನು ವೀಕ್ಷಣೆ ಮಾಡಿದರೆ, ಕೆಂಗಲ್ಲ ಕಡಪ್ಪಟ್ಟಿ ಗ್ರಾಮದಲ್ಲಿ ನರೇಗಾದಡಿ ಕೈಗೊಂಡ ಕಾಮಗಾರಿಗಳನ್ನು ಪರಿಶೀಲಿಸಿದರು. ಈ ಸಂದರ್ಭದಲ್ಲಿ ಸಂಸದ ಪಿ.ಸಿ.ಗದ್ದಿಗೌಡರ, ರೈತರಿಗೆ ಸೂಕ್ತ ಪರಿಹಾರ ದೊರೆಯುವಂತೆ ವರದಿ ಸಲ್ಲಿಸಲು ತಿಳಿಸಿದರು. ಬೆಂಗಳೂರು ಗ್ರಾಮಾಂತರ ಜಿಲ್ಲೆಗೆ ಇಂದು ಕೇಂದ್ರ ಬರ ಅಧ್ಯಯನ ತಂಡ ಭೇಟಿ ನೀಡಲಿದೆ. ಕೇಂದ್ರ ತಂಡದ ಭೇಟಿಯ ಹಿನ್ನೆಲೆಯಲ್ಲಿ ಪೂರ್ವಭಾವಿಯಾಗಿ ಜಿಲ್ಲೆಯ ಕೆಲವು ಗ್ರಾಮಗಳಿಗೆ ಖುದ್ದಾಗಿ ಭೇಟಿ ನೀಡಿ, ಬೆಳೆಗಳ ವಾಸ್ತವ ಸಮೀಕ್ಷೆ ನಡೆಸಲಾಗಿದ್ದು, ಅಗತ್ಯ ಸಿದ್ಧತೆ ಕೈಗೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಡಾಕ್ಟರ್ ಎನ್.ಶಿವಶಂಕರ್ ತಿಳಿಸಿದ್ದಾರೆ.

*******

**ಇಂದಿನಿಂದ ಇದೇ ತಿಂಗಳ 12ರವರೆಗೆ, ಬಿಪಿಎಲ್** ಕಾರ್ಡ್ ತಿದ್ದುಪಡಿಗೆ ಅವಕಾಶ ಕಲ್ಪಿಸಲಾಗಿದೆ ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ತಿಳಿಸಿದೆ. ಬೆಳಗಾವಿ, ಬಾಗಲಕೋಟೆ, ಚಾಮರಾಜನಗರ, ಚಿಕ್ಕಮಗಳೂರು, ದಕ್ಷಿಣ ಕನ್ನಡ, ಧಾರವಾಡ, ಗದಗ್, ಹಾಸನ, ಹಾವೇರಿ, ಕೊಡಗು, ಮಂಡ್ಯ, ಮೈಸೂರು, ಉಡುಪಿ, ಉತ್ತರ ಕನ್ನಡ ಮತ್ತು ವಿಜಯಪುರ ಜಿಲ್ಲೆಗಳ "ಕರ್ನಾಟಕ ಒನ್", "ಗ್ರಾಮ್ ಒನ್" ಕೇಂದ್ರಗಳಲ್ಲಿ ಬೆಳಗ್ಗೆ 10 ಗಂಟೆಯಿಂದ ಸಂಜೆ 7 ಗಂಟೆಯವರೆಗೆ, ಬಿ.ಪಿ.ಎಲ್. ಕಾರ್ಡ್ ತಿದ್ದುಪಡಿಗೆ ಅವಕಾಶ ಕಲ್ಪಿಸಲಾಗಿದೆ.

*******

## ಈಗ ಸಂಕ್ಷಿಪ್ತ ಸುದ್ದಿಗಳು

**ಹಳಿಯಾಳ ತಾಲೂಕಿನ ಎಲ್ಲ ಗ್ರಾಮಗಳಿಗೂ ಕಾಳಿ** ನದಿಯಿಂದ ಕುಡಿಯುವ ನೀರು ಪೂರೈಸುವ ಬಹುಗ್ರಾಮ ಕುಡಿಯುವ ನೀರಿನ ಯೋಜನೆಯು ಅಂತಿಮ ಹಂತಕ್ಕೆ ತಲುಪಿದೆ. ಅತೀ ಶೀಘ್ರದಲ್ಲೇ ಯೋಜನೆ ಪ್ರಾರಂಭವಾಗಲಿದೆ. ಇದರಿಂದ ಗ್ರಾಮೀಣ ಭಾಗದ ಜನರ ಜೀವ ಜಲದ ಸಮಸ್ಯೆ ಬಗೆಹರಿಯಲಿದೆ ಎಂದು ಹಳಿಯಾಳ ಕ್ಷೇತ್ರದ ಶಾಸಕ ಆರ್.ವಿ.ದೇಶಪಾಂಡೆ ಹೇಳಿದ್ದಾರೆ. ಜಲಜೀವನ್ ಮೀ ್ನ್ ಯೋಜನೆಯಡಿ ಉತ್ತರಕನ್ನಡ ಜಿಲ್ಲೆಯ ಹಳಿಯಾಳ ತಾಲೂಕಿನ ಜನಗಾ ಹಾಗೂ ಗೋಲೆಹಳ್ಳಿ ಗ್ರಾಮದ 605 ಮನೆಗಳಿಗೆ ಶುದ್ಧ ಕುಡಿಯುವ ನೀರು ಪೂರೈಸುವ ಕಾಮಗಾರಿಗೆ ಚಾಲನೆ ನೀಡಿ, ಅವರು ಮಾತನಾಡಿದರು.

*******

**ಮೈಸೂರು ದಸರಾ** ಹಬ್ಬದ ಪ್ರಯುಕ್ತ ಪ್ರವಾಸಿಗರು, ಜನಸಾಮಾನ್ಯರು ಹಾಗೂ ಸ್ಥಳೀಯರಿಗೆ ಮೃಗಾಲಯವನ್ನು ವೀಕ್ಷಿಸಲು ಅನುವಾಗುವಂತೆ, ಅಕ್ಟೋಬರ್ 17 ಮತ್ತು ಅಕ್ಟೋಬರ್ 24ರ ಮಂಗಳವಾರಗಳಂದು ಶ್ರೀ ಚಾಮರಾಜೇಂದ್ರ ಮೃಗಾಲಯ ಹಾಗೂ ಕಾರಂಜಿಕೆರೆ ಪ್ರಕೃತಿ ಉದ್ಯಾನವನವನ್ನು ಸಾರ್ವಜನಿಕರ ವೀಕ್ಷಣೆಗೆ ತೆರೆದಿರಲಾಗುವುದು. ಅಕ್ಟೋಬರ್ 15 ರಿಂದ ಅಕ್ಟೋಬರ್ 29ರ ವರೆಗೆ ವಿದ್ಯಾರ್ಥಿಗಳ ರಿಯಾಯಿತಿಯನ್ನು ರದ್ದುಗೊಳಿಸಲಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

*******

**ಚಿಕ್ಕಮಗಳೂರು ಜಿಲ್ಲೆಯ 226** ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಮಹಾತ್ಮ ಗಾಂಧಿ ನರೇಗಾ ಯೋಜನೆಯ 2024–25 ನೇ ಸಾಲಿನ ಕಾರ್ಮಿಕ ಆಯವ್ಯಯ ತಯಾರಿಸಲು ಒಂದು ತಿಂಗಳ ಕಾಲ 'ಉದ್ಯೋಗ ಖಾತರಿ ನಡಿಗೆ, ಸುಸ್ಥಿರತೆಯಡೆಗೆ' ಅಭಿಯಾನವನ್ನು ಹಮ್ಮಿಕೊಂಡಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಣಾಧಿಕಾರಿ ಡಾಕ್ಟರ್ ಗೋಪಾಲಕೃ ್ಣ ತಿಳಿಸಿದ್ದಾರೆ.

*******

**ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ** ಉದ್ಯೋಗ ಖಾತರಿ ಯೋಜನೆಗೆ ಸಂಬಂಧಿಸಿದ ಸೌಲಭ್ಯಗಳು, ಮಾಹಿತಿ ಪಡೆಯಲು ಹಾಗೂ ದೂರು, ಸಮಸ್ಯೆಗಳನ್ನು ತಿಳಿಸಲು ಚಾಮರಾಜನಗರದ ಜಿಲ್ಲಾ ಪಂಚಾಯಿತಿ ಕಚೇರಿಯಲ್ಲಿ ಉಚಿತ ಸಹಾಯವಾಣಿ ಸಂಖ್ಯೆ 08226–224015 ಸೌಲಭ್ಯ ಲಭ್ಯವಿದೆ. ಈ ಸೌಲಭ್ಯದ ಸದುಪಯೋಗ ಪಡಿಸಿಕೊಳ್ಳುವಂತೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಆನಂದ್ ಪ್ರಕಾಶ್ ಮೀನಾ ತಿಳಿಸಿದ್ದಾರೆ.

*******